# ದಿನಾಂಕ:23-05-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

## ವಿಷಯದ ಸಂಖ್ಯೆ : 01 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ತುಂಬ ತೊಂದರೆ ಇರುವ ಹಿನ್ನಲೆಯಲ್ಲಿ, ಕುಡಿಯುವ ನೀರಿನ ನಿರ್ವಹಣೆಗೆ ಈಗಾಗಲೇ ಹಲವಾರು ಸಭೆಗಳಲ್ಲಿ ಕೈಗೊಂಡ ತೀರ್ಮಾನದಂತೆ ಬಿಡುಗಡೆ ಮಾಡಿರುವ ಅನುದಾನದೊಂದಿಗೆ, ಹಳೆ ವಾರ್ಡಿಗೆ ತಲಾ ರೂ.25.00 ಲಕ್ಷಗಳು, ಹೊಸ ವಾರ್ಡಿಗೆ ತಲಾ 50.00 ಲಕ್ಷಗಳನ್ನು ಕುಡಿಯುವ ನೀರಿನ ನಿರ್ವಹಣೆಗೆ ಬಿಡುಗಡೆ ಮಾಡಲು ಆಯುಕ್ತರು ಕ್ರಮವಹಿಸುವುದು.

ಶ್ರೀ. ಬಿ.ಸೋಮಶೇಖರ್ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿಗೆ ತುಂಬ ತೊಂದರೆ ಇರುವ ಹಿನ್ನಲೆಯಲ್ಲಿ, ಕುಡಿಯುವ ನೀರಿನ ನಿರ್ವಹಣೆಗೆ ಈಗಾಗಲೇ ಹಲವಾರು ಸಭೆಗಳಲ್ಲಿ ಕೈಗೊಂಡ ತೀರ್ಮಾನದಂತೆ ಬಿಡುಗಡೆ ಮಾಡಿರುವ ಅನುದಾನದೊಂದಿಗೆ, ಹಳೆ ವಾರ್ಡಿಗೆ ತಲಾ ರೂ.25.00 ಲಕ್ಷಗಳು, ಹೊಸ ವಾರ್ಡಿಗೆ ತಲಾ 50.00 ಲಕ್ಷಗಳನ್ನು ಕುಡಿಯುವ ನೀರಿನ ನಿರ್ವಹಣೆಗೆ ಬಿಡುಗಡೆ ಮಾಡಲು ಆಯುಕ್ತರು ಕ್ರಮವಹಿಸುವುದೆಂದು ಸಭೆಯು ತೀರ್ಮಾನಿಸಲಾಯಿತು".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

## ದಿನಾಂಕ:23-05-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

### ವಿಷಯದ ಸಂಖ್ಯೆ : 02 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಸನ್ಮಾನ್ಯ ಮುಖ್ಯಮಂತ್ರಿಯವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಶೇಕಡ 5ರ ರಿಯಾಯಿತಿ ಪಡೆದು ಸಾರ್ವಜನಿಕರು 2013-14ರ ಆಸ್ತಿ ತೆರಿಗೆ ಪಾವತಿಸಲು ದಿನಾಂಕವನ್ನು ಜೂನ್ 30, 2013ರ ವರೆಗೆ ಗಡುವು ವಿಸ್ತರಿಸಿರುತ್ತಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಈ ನಿಟ್ಟಿನಲ್ಲಿ ಸೂಕ್ತ ಆದೇಶವನ್ನು ಹೊರಡಿಸಲು ಆಯುಕ್ತರು ಕ್ರಮವಹಿಸುವುದು.

ಶ್ರೀ. ಬಿ.ಸೋಮಶೇಖರ್ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಸನ್ಮಾನ್ಯ ಮುಖ್ಯಮಂತ್ರಿಯವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಶೇಕಡ 5ರ ರಿಯಾಯಿತಿ ಪಡೆದು ಸಾರ್ವಜನಿಕರು 2013-14ರ ಆಸ್ತಿ ತೆರಿಗೆ ಪಾವತಿಸಲು ದಿನಾಂಕವನ್ನು ಜೂನ್ 30, 2013ರ ವರೆಗೆ ಗಡುವು ವಿಸ್ತರಿಸಿರುತ್ತಾರೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಈ ನಿಟ್ಟಿನಲ್ಲಿ ಸೂಕ್ತ ಆದೇಶವನ್ನು ಹೊರಡಿಸಲು ಆಯುಕ್ತರು ಕ್ರಮವಹಿಸುವುದೆಂದು ಸಭೆಯು ತೀರ್ಮಾನಿಸಲಾಯಿತು".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

# ದಿನಾಂಕ:23-05-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

## ವಿಷಯದ ಸಂಖ್ಯೆ : 03 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಪೂಜ್ಯ ಮಹಾಪೌರರ ಅನುದಾನ, ಉಪ ಮಹಾಪೌರರ ಅನುದಾನ ಹಾಗೂ ವಿಶೇಷ ಅನುದಾನಗಳ ಹಲವಾರು ಕಾಮಗಾರಿಗಳನ್ನು ಸ್ಥಗಿತಗೊಳಿಸಲು ಕ್ರಮವಹಿಸಿದ್ದು, ಈ ರೀತಿಯಾಗಿ ಸ್ಥಗಿತಗೊಳಿಸುವ ಮುನ್ನ ಸ್ಥಳೀಯ ನಗರ ಪಾಲಿಕೆ ಸದಸ್ಯರ ಅಭಿಪ್ರಾಯ ಪಡೆದಿರುವುದಿಲ್ಲ. ಈ ಹಿನ್ನಲೆಯಲ್ಲಿ, ಕಾಮಗಾರಿಗಳನ್ನು ಸ್ಥಗಿತಗೊಳಿಸುವಂತೆ ಕೈಗೊಂಡಿರುವ ಆದೇಶವನ್ನು ಈ ಕೂಡಲೇ ರದ್ದು ಪಡಿಸಿ, ಕಾಮಗಾರಿಗಳನ್ನು ಮುಂದುವರೆಸುವಂತೆ ಸೂಕ್ತ ಆದೇಶವನ್ನು ಹೊರಡಿಸಲು ಆಯುಕ್ತರು ಕ್ರಮವಹಿಸುವುದು.

ಶ್ರೀ. ಬಿ.ಸೋಮಶೇಖರ್ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

<u>ನಿರ್ಣಯ:</u> "ಪೂಜ್ಯ ಮಹಾಪೌರರ ಅನುದಾನ, ಉಪ ಮಹಾಪೌರರ ಅನುದಾನ ಹಾಗೂ ವಿಶೇಷ ಅನುದಾನಗಳ ಹಲವಾರು ಕಾಮಗಾರಿಗಳನ್ನು ಸ್ಥಗಿತಗೊಳಿಸಲು ಕ್ರಮವಹಿಸಿದ್ದು, ಈ ರೀತಿಯಾಗಿ ಸ್ಥಗಿತಗೊಳಿಸುವ ಮುನ್ನ ಸ್ಥಳೀಯ ನಗರ ಪಾಲಿಕೆ ಸದಸ್ಯರ ಅಭಿಪ್ರಾಯ ಪಡೆದಿರುವುದಿಲ್ಲ. ಈ ಹಿನ್ನಲೆಯಲ್ಲಿ, ಕಾಮಗಾರಿಗಳನ್ನು ಸ್ಥಗಿತಗೊಳಿಸುವಂತೆ ಕೈಗೊಂಡಿರುವ ಆದೇಶವನ್ನು ಈ ಕೂಡಲೇ ರದ್ದು ಪಡಿಸಿ, ಕಾಮಗಾರಿಗಳನ್ನು ಮುಂದುವರೆಸುವಂತೆ ಸೂಕ್ತ ಆದೇಶವನ್ನು ಹೊರಡಿಸಲು ಆಯುಕ್ತರು ಕ್ರಮವಹಿಸುವುದೆಂದು ಸಭೆಯು ತೀರ್ಮಾನಿಸಲಾಯಿತು".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

# ದಿನಾಂಕ:23-05-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

## ವಿಷಯದ ಸಂಖ್ಯೆ : 04 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಚುನಾವಣೆ ನಡೆಯುವ ಸಂದರ್ಭದಲ್ಲಿ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣದಿಂದಾಗಿ, ನಗರ ಪಾಲಿಕೆಯಲ್ಲಿ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು, ವಲಯ ಮಟ್ಟದಲ್ಲಿ ನಕ್ಷೆ ಮಂಜೂರು ಮಾಡುವ ಕಾರ್ಯಗಳು ಸ್ಥಗಿತಗೊಂಡಿದ್ದವು. ಆದರೆ ಕೇಂದ್ರ ಕಛೇರಿಯಲ್ಲಿ ಹಲವಾರು ದೊಡ್ಡ ದೊಡ್ಡ ವಾಣಿಜ್ಯ ಸಂಕೀರ್ಣಗಳು, ವಸತಿ ಸಂಕೀರ್ಣಗಳಿಗೆ ನಕ್ಷೆ ಮಂಜೂರಾಗಿರುತ್ತದೆ. ಈ ಹಿನ್ನಲೆಯಲ್ಲಿ, ಚುನಾವಣಾ ಸಮಯದಲ್ಲಿ ಅಧಿಕಾರಿಗಳು ಕೈಗೊಂಡ ಯಾವುದೇ ರೀತಿಯ ಮಂಜೂರಾತಿ ಹಾಗೂ ನಿರ್ಣಯಗಳನ್ನು ರದ್ದುಪಡಿಸಲು ಆಯುಕ್ತರು ಕ್ರಮವಹಿಸುವುದು.

ಶ್ರೀ. ಬಿ.ಸೋಮಶೇಖರ್ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಚುನಾವಣೆ ನಡೆಯುವ ಸಂದರ್ಭದಲ್ಲಿ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣದಿಂದಾಗಿ, ನಗರ ಪಾಲಿಕೆಯಲ್ಲಿ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು, ವಲಯ ಮಟ್ಟದಲ್ಲಿ ನಕ್ಷೆ ಮಂಜೂರು ಮಾಡುವ ಕಾರ್ಯಗಳು ಸ್ಥಗಿತಗೊಂಡಿದ್ದವು. ಆದರೆ ಕೇಂದ್ರ ಕಛೇರಿಯಲ್ಲಿ ಹಲವಾರು ದೊಡ್ಡ ದೊಡ್ಡ ವಾಣಿಜ್ಯ ಸಂಕೀರ್ಣಗಳು, ವಸತಿ ಸಂಕೀರ್ಣಗಳಿಗೆ ನಕ್ಷೆ ಮಂಜೂರಾಗಿರುತ್ತದೆ. ಈ ಹಿನ್ನಲೆಯಲ್ಲಿ, ಚುನಾವಣಾ ಸಮಯದಲ್ಲಿ ಅಧಿಕಾರಿಗಳು ಕೈಗೊಂಡ ಯಾವುದೇ ರೀತಿಯ ಮಂಜೂರಾತಿ ಹಾಗೂ ನಿರ್ಣಯಗಳನ್ನು ರದ್ದುಪಡಿಸಲು ಆಯುಕ್ತರು ಕ್ರಮವಹಿಸುವುದೆಂದು ಸಭೆಯು ತೀರ್ಮಾನಿಸಲಾಯಿತು".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

# ದಿನಾಂಕ:23-05-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

## ವಿಷಯದ ಸಂಖ್ಯೆ : 05 / 2013-14

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಪ್ರಧಾನ ಕಾರ್ಯದರ್ಶಿ, ರಾಷ್ಟ್ರೋತ್ಥಾನ ಪರಿಷತ್ ರವರು ಸಲ್ಲಿಸಿರುವ ಮನವಿ ಪತ್ರದಲ್ಲಿ ವಾರ್ಡ್ 142(49) ಸುಂಕೇನಹಳ್ಳಿ, ಪೂರ್ಣಚಂದ್ರ ತೇಜಸ್ವಿ ರಸ್ತೆಯಲ್ಲಿರುವ 62x93=(5766.00 ಚ.ಅಡಿ) ಅಡಿಗಳ ವಿಸ್ತೀರ್ಣದ ಖಾಲಿ ನಿವೇಶನವನ್ನು ರಕ್ತನಿಧಿ ಕಟ್ಟಡ ನಿರ್ಮಾಣಕ್ಕಾಗಿ ರಾಷ್ಟ್ರೋತ್ಥಾನ ಪರಿಷತ್‌ರವರಿಗೆ ದೀರ್ಘಾವಧಿ ಗುತ್ತಿಗೆಗೆ ಶುಲ್ಕ ರಹಿತವಾಗಿ ಅಥವಾ ಅತ್ಯಂತ ಕಡಿಮೆ ದರ ನಿಗಧಿಪಡಿಸಿ ನೀಡುವಂತೆ ಕೋರಿರುತ್ತಾರೆ.

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಕೆಂಪೇಗೌಡನಗರ ಉಪ ವಿಭಾಗರವರು ನೀಡಿರುವ ವರದಿಯಂತೆ ಕರ್ನಾಟಕ ಸರ್ಕಾರದ ದಿನಾಂಕ;21-09-2011ರ ಮಾರ್ಗಸೂಚಿ ದರಗಳನ್ವಯ ಪ್ರಸ್ತುತ ಸ್ವತ್ತಿನ ಮಾರುಕಟ್ಟೆ ದರವು ಚದರ ಅಡಿ 1ಕ್ಕೆ ರೂ.2,000/- ಗಳು ವಸತಿಯೇತರ ನಿವೇಶನವಾಗಿರುವುದರಿಂದ ಹೆಚ್ಚುವರಿಯಾಗಿ 40% ಸೇರಿಸಿದಲ್ಲಿ ಚದರಡಿ 1ಕ್ಕೆ ರೂ.2800/- ಗಳಾಗುತ್ತದೆ. ಸ್ವತ್ತಿನ ವಿಸ್ತೀರ್ಣ 5766 ಚದರಡಿಗಳಿದ್ದು, 5766x2800=ರೂ.1,61,44,800/- ಗಳಾಗಿದ್ದು, ಶೇ.10% ರಂತೆ ಪರಿಗಣಿಸಿದಲ್ಲಿ ವಾರ್ಷಿಕ ಮೌಲ್ಯ ರೂ.16,14,480/- ಗಳು ಮತ್ತು ಮಾಸಿಕ ರೂ.1,34,540/- ಗಳಾಗುತ್ತದೆಂದು ವರದಿ ಮಾಡಿರುತ್ತಾರೆ.

ಶೇ.100% ಸಮಾಜ ಸೇವೆ ಸಲ್ಲಿಸುತ್ತಿರುವ ಮತ್ತು ಧರ್ಮದತ್ತಿ ಸಂಸ್ಥೆಗಳಿಗೆ ಮೇಲ್ಕಂಡ ಗುತ್ತಿಗೆ ಹಣದಲ್ಲಿ ಸೂಕ್ತ ರಿಯಾಯಿತಿ ದರದಲ್ಲಿ ಪರಿಗಣಿಸಲು ಸ್ಥಾಯಿ ಸಮಿತಿಗಳಿಗೆ, ಪಾಲಿಕೆ ಹಾಗೂ ಸರ್ಕಾರಕ್ಕೆ ಶಿಫಾರಸ್ಸು ಮಾಡಬಹುದಾಗಿದ್ದು, ವಾರ್ಷಿಕ ಗುತ್ತಿಗೆ ಹಣ ನಿಗಧಿಪಡಿಸಿ ಸರ್ಕಾರಕ್ಕೆ ಶಿಫಾರಸ್ಸು ಮಾಡಬಹುದಾಗಿದೆಯೆಂದು ಅಭಿಪ್ರಾಯಿಸಿ ಸ್ಥಾಯಿ ಸಮಿತಿಗಳು ಹಾಗೂ ಪಾಲಿಕೆ ಸಭೆ ಮುಖಾಂತರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬಹುದೆಂದು ಅಭಿಪ್ರಾಯಿಸಿ ಕಡತ ಸಲ್ಲಿಸಿರುತ್ತಾರೆ.

ಆದರೆ, ಇದು ಹೊಸದಾಗಿ ಗುತ್ತಿಗೆಗೆ ನೀಡಲು ಕೋರಿರುವ ಪ್ರಕರಣವಾಗಿದ್ದು, ಸರ್ಕಾರದ ಆದೇಶ ಸಂಖ್ಯೆ: ನಅಇ/129/ಟಿಎಂಡಿ/2002, ಬೆಂಗಳೂರು, ದಿನಾಂಕ:02-06-2003ರ ಸುತ್ತೋಲೆ ಕ್ರಮ ಸಂಖ್ಯೆ: VI ರನ್ವಯ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ಅಧಿಕಾರವನ್ನು ಉಪಯೋಗಿಸಿ ಸ್ವತ್ತುಗಳನ್ನು ಗುತ್ತಿಗೆ ಆಧಾರದ ಮೇಲೆ ನೀಡಿದಲ್ಲಿ, ಅಂತಹ ಗುತ್ತಿಗೆಗಳನ್ನು ಸಾರ್ವಜನಿಕ ಹರಾಜು ಮೂಲಕವೇ ನೀಡುವುದೆಂದಿದೆ.

ಆದ್ದರಿಂದ, ಸದರಿ ಸ್ವತ್ತನ್ನು 30 ವರ್ಷಗಳ ಅವಧಿಗೆ ಗುತ್ತಿಗೆಗೆ ನೀಡುವ ಬಗ್ಗೆ ಸೂಕ್ತ ನಿರ್ಣಯಕ್ಕಾಗಿ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಹಾಗೂ ಪಾಲಿಕೆ ಸಭೆ ಮುಂದೆ ಟಿಪ್ಪಣಿ ಮಂಡಿಸಲಾಗಿತ್ತು. ಪಾಲಿಕೆ ಸಭೆಯ ದಿನಾಂಕ:26-02-2013ರ ವಿಷಯದ ಸಂಖ್ಯೆ:411/12-13 ರಲ್ಲಿ ಆಯುಕ್ತರವರ ದಿನಾಂಕ:25-02-2013ರ ಟಿಪ್ಪಣಿಯನ್ನು ಭಾಗಶ: ಒಪ್ಪುತ್ತಾ, ಮಾರುಕಟ್ಟೆ ದರದಲ್ಲಿ ಕ್ರಯಕ್ಕೆ ನೀಡುವುದೆಂದು ಸಭೆಯು ತೀರ್ಮಾನಿಸಿದ್ದು, ಆದಾಗ್ಯೂ ಸದರಿ ಸ್ವತ್ತನ್ನು ಮಾರುಕಟ್ಟೆ ದರಕ್ಕೆ ನೀಡುವ ಬದಲು 30

......................2

ವರ್ಷಗಳ ದೀರ್ಘಾವಧಿ ಗುತ್ತಿಗೆಗೆ ನೀಡುವುದು ಸೂಕ್ತವೆಂದು ಅಭಿಪ್ರಾಯಿಸಿ ಕೆ.ಎಂ.ಸಿ. ಕಾಯ್ದೆ 1976 ರನ್ವಯ ಸರ್ಕಾರದ ಅನುಮೋದನೆ ಕೋರಿರುವುದನ್ನು ಸರ್ಕಾರವು ಪರಿಗಣಿಸಿ ಸರ್ಕಾರದ ಆದೇಶ ಸಂಖ್ಯೆ: ನಅಇ 101 ಎಂಎನ್‌ಜಿ 2013, ಬೆಂಗಳೂರು ದಿನಾಂಕ:20-03-2013 ಪೂರ್ಣಚಂದ್ರ ತೇಜಸ್ವಿ ರಸ್ತೆಯಲ್ಲಿರುವ 62*93(5766.00 ಚದರ ಅಡಿ) ಅಡಿಗಳ ವಿಸ್ತೀರ್ಣದ ಖಾಲಿ ನಿವೇಶನವನ್ನು ರಕ್ತನಿಧಿ ಕಟ್ಟಡ ನಿರ್ಮಾಣಕ್ಕಾಗಿ ವಾರ್ಷಿಕ ರೂ.12000/-ಗಳ ಗುತ್ತಿಗೆ ದರ ನಿಗಧಿಪಡಿಸಿ 30 ವರ್ಷಗಳ (ಮೂವತ್ತು) ಅವಧಿಗೆ ರಾಷ್ಟ್ರೋತ್ಥಾನ ಪರಿಷತ್‌ಗೆ ಗುತ್ತಿಗೆಗೆ ನೀಡಲು ಆದೇಶಿಸಿದ್ದು, ಸರ್ಕಾರದ ಆದೇಶವನ್ನು ಬಿ.ಬಿ.ಎಂ.ಪಿ. ಸಭೆಯಲ್ಲಿ ದಾಖಲಾತಿ ಮಾಡಿಕೊಳ್ಳುವ ಬಗ್ಗೆ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:20-05-2013ರ ಟಿಪ್ಪಣಿ.

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ಸರ್ಕಾರದ ದಿನಾಂಕ:20-03-2013ರ ಆದೇಶವನ್ನು ದಾಖಲಾತಿಗಾಗಿ ಒಪ್ಪುವುದು".

ಶ್ರೀ. ಬಿ.ಸೋಮಶೇಖರ್ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

<u>ನಿರ್ಣಯ:</u> "ಸರ್ಕಾರದ ದಿನಾಂಕ:20-03-2013ರ ಆದೇಶವನ್ನು ದಾಖಲಾತಿಗಾಗಿ ಒಪ್ಪುವುದೆಂದು ಸಭೆಯು ತೀರ್ಮಾನಿಸಲಾಯಿತು".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

# ದಿನಾಂಕ:23-05-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಿದ ಸಂತಾಪ ಸೂಚಕ ನಿರ್ಣಯ

## ವಿಷಯದ ಸಂಖ್ಯೆ : 06 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಬೆಂಗಳೂರು ಮಹಾನಗರ ಪಾಲಿಕೆಯ ಹನುಮಂತನಗರ ವಿಭಾಗದಿಂದ ನಗರ ಪಾಲಿಕೆಯ ಸದಸ್ಯರಾಗಿದ್ದ ಶ್ರೀ. ಜಿ.ಸಿ.ನರಸಿಂಹಮೂರ್ತಿ ರವರು ದಿನಾಂಕ:05-05-2013 ರಂದು ನಿಧನ ಹೊಂದಿರುತ್ತಾರೆ. ಈ ವಿಷಯವನ್ನು ಸಭೆಗೆ ತಿಳಿಸಲು ವಿಷಾದಿಸುತ್ತೇನೆ.

ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಗಂತರ ಆತ್ಮಕ್ಕೆ ಚಿರಶಾಂತಿಯು ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ. ಗಂಗಭೈರಯ್ಯ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಬೆಂಗಳೂರು ಮಹಾನಗರ ಪಾಲಿಕೆಯ ಹನುಮಂತನಗರ ವಿಭಾಗದಿಂದ ನಗರ ಪಾಲಿಕೆಯ ಸದಸ್ಯರಾಗಿದ್ದ ಶ್ರೀ. ಜಿ.ಸಿ.ನರಸಿಂಹಮೂರ್ತಿ ರವರು ದಿನಾಂಕ:05-05-2013 ರಂದು ನಿಧನ ಹೊಂದಿರುತ್ತಾರೆ. ಈ ವಿಷಯವನ್ನು ಸಭೆಗೆ ತಿಳಿಸಲು ವಿಷಾದಿಸುತ್ತೇನೆ.

ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಗಂತರ ಆತ್ಮಕ್ಕೆ ಚಿರಶಾಂತಿಯು ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಸಭೆಯು ಪ್ರಾರ್ಥಿಸುತ್ತದೆ".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

# ದಿನಾಂಕ:23-05-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಿದ ಅಭಿನಂದನಾ ನಿರ್ಣಯ

## ವಿಷಯದ ಸಂಖ್ಯೆ : 07 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

2013ರ ಕರ್ನಾಟಕ ವಿಧಾನ ಸಭಾ ಚುನಾವಣೆಯಲ್ಲಿ ಬಹುಮತ ಗಳಿಸಿ, ಈ ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸನ್ಮಾನ್ಯ ಶ್ರೀ ಸಿದ್ದರಾಮಯ್ಯನವರಿಗೂ ಹಾಗೂ ಅವರ ಸಚಿವ ಸಂಪುಟದ ಎಲ್ಲಾ ಮಂತ್ರಿಗಳಿಗೆ ನಗರ ಪಾಲಿಕೆಯು ಅಭಿನಂದನೆಯನ್ನು ಸಲ್ಲಿಸುತ್ತದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಿಂದ ಚುನಾಯಿತರಾದ ಎಲ್ಲಾ ಶಾಸಕರಿಗೆ ಈ ಸಭೆಯು ಅಭಿನಂದನೆಯನ್ನು ಸಲ್ಲಿಸುತ್ತದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಹಾಲಿ ಸದಸ್ಯರಾಗಿ, ಕೆ.ಆರ್.ಪುರಂ ವಿಧಾನ ಸಭಾ ಕ್ಷೇತ್ರದಿಂದ ಆಯ್ಕೆಯಾದ ಶ್ರೀ. ಭೈರತಿ ಬಸವರಾಜು ಮತ್ತು ರಾಜರಾಜೇಶ್ವರಿನಗರ ವಿಧಾನ ಸಭಾ ಕ್ಷೇತ್ರದಿಂದ ಆಯ್ದೆಯಾದ ಶ್ರೀ. ಮುನಿರತ್ನರವರಿಗೂ ಈ ಸಭೆಯು ಅಭಿನಂದನೆಯನ್ನು ಸಲ್ಲಿಸುತ್ತದೆ.

ಶ್ರೀ. ಗಂಗಭೈರಯ್ಯ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "2013ರ ಕರ್ನಾಟಕ ವಿಧಾನ ಸಭಾ ಚುನಾವಣೆಯಲ್ಲಿ ಬಹುಮತ ಗಳಿಸಿ, ಈ ರಾಜ್ಯದ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸನ್ಮಾನ್ಯ ಶ್ರೀ ಸಿದ್ದರಾಮಯ್ಯನವರಿಗೂ ಹಾಗೂ ಅವರ ಸಚಿವ ಸಂಪುಟದ ಎಲ್ಲಾ ಮಂತ್ರಿಗಳಿಗೆ ನಗರ ಪಾಲಿಕೆಯು ಅಭಿನಂದನೆಯನ್ನು ಸಲ್ಲಿಸುತ್ತದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಿಂದ ಚುನಾಯಿತರಾದ ಎಲ್ಲಾ ಶಾಸಕರಿಗೆ ಈ ಸಭೆಯು ಅಭಿನಂದನೆಯನ್ನು ಸಲ್ಲಿಸುತ್ತದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಹಾಲಿ ಸದಸ್ಯರಾಗಿ, ಕೆ.ಆರ್.ಪುರಂ ವಿಧಾನ ಸಭಾ ಕ್ಷೇತ್ರದಿಂದ ಆಯ್ಕೆಯಾದ ಶ್ರೀ. ಭೈರತಿ ಬಸವರಾಜು ಮತ್ತು ರಾಜರಾಜೇಶ್ವರಿನಗರ ವಿಧಾನ ಸಭಾ ಕ್ಷೇತ್ರದಿಂದ ಆಯ್ದೆಯಾದ ಶ್ರೀ. ಮುನಿರತ್ನರವರಿಗೂ ಈ ಸಭೆಯು ಅಭಿನಂದನೆಯನ್ನು ಸಲ್ಲಿಸುತ್ತದೆ".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

## ದಿನಾಂಕ:25-06-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

## ವಿಷಯದ ಸಂಖ್ಯೆ : 08 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಯಾದ ಶ್ರೀ. ಸಿದ್ಧರಾಮಯ್ಯರವರಿಗೂ ಹಾಗೂ ಬೆಂಗಳೂರು ನಗರದ ಉಸ್ತುವಾರಿ ಸಚಿವರು ಹಾಗೂ ಸಾರಿಗೆ ಸಚಿವರು ಆದ ಶ್ರೀ. ರಾಮಲಿಂಗಾರೆಡ್ಡಿರವರಿಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪೌರ ಸನ್ಮಾನ ಮಾಡಲು ಆಯುಕ್ತರು ಕ್ರಮ ಕೈಗೊಳ್ಳುವುದು.

ಶ್ರೀ. ಗಂಗಭೈರಯ್ಯ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

ನಿರ್ಣಯ: "ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಯಾದ ಶ್ರೀ. ಸಿದ್ಧರಾಮಯ್ಯರವರಿಗೂ ಹಾಗೂ ಬೆಂಗಳೂರು ನಗರದ ಉಸ್ತುವಾರಿ ಸಚಿವರು ಹಾಗೂ ಸಾರಿಗೆ ಸಚಿವರು ಆದ ಶ್ರೀ. ರಾಮಲಿಂಗಾರೆಡ್ಡಿರವರಿಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪೌರ ಸನ್ಮಾನ ಮಾಡಲು ಆಯುಕ್ತರು ಕ್ರಮ ಕೈಗೊಳ್ಳುವುದೆಂದು ಸಭೆಯು ತೀರ್ಮಾನಿಸಲಾಯಿತು".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು

# ದಿನಾಂಕ:25-06-2013 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

## ವಿಷಯದ ಸಂಖ್ಯೆ : 09 / 2013-14

ಶ್ರೀ. ಎನ್.ನಾಗರಾಜು, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಉತ್ತರಾಖಂಡದ ಬದರೀನಾಥ್ ಮತ್ತು ಕೇದಾರನಾಥ ಪ್ರದೇಶದಲ್ಲಿ ಭೀಕರ ಹಿಮಾಲಯ ಸುನಾಮಿಯಿಂದಾಗಿ ಸಾವಿರಾರು ಜನರು ಮರಣ ಹೊಂದಿರುತ್ತಾರೆ. ಈ ರೀತಿ ಅಕಾಲಿಕ ಮರಣ ಹೊಂದಿರುವವರಿಗೆ ಚಿರಶಾಂತಿಯನ್ನು ಕೋರುತ್ತಾ, ಅವರ ಕುಟುಂಬ ಸದಸ್ಯರಿಗೆ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಪ್ರಾರ್ಥಿಸುತ್ತೇನೆ.

ಶ್ರೀ. ಗಂಗಭೈರಯ್ಯ ರವರು ಶ್ರೀ. ಎನ್.ನಾಗರಾಜು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಉತ್ತರಾಖಂಡದ ಬದರೀನಾಥ್ ಮತ್ತು ಕೇದಾರನಾಥ ಪ್ರದೇಶದಲ್ಲಿ ಭೀಕರ ಹಿಮಾಲಯ ಸುನಾಮಿಯಿಂದಾಗಿ ಸಾವಿರಾರು ಜನರು ಮರಣ ಹೊಂದಿರುತ್ತಾರೆ. ಈ ರೀತಿ ಅಕಾಲಿಕ ಮರಣ ಹೊಂದಿರುವವರಿಗೆ ಚಿರಶಾಂತಿಯನ್ನು ಕೋರುತ್ತಾ, ಅವರ ಕುಟುಂಬ ಸದಸ್ಯರಿಗೆ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಭಗವಂತನು ನೀಡಲೆಂದು ಸಭೆಯು ಪ್ರಾರ್ಥಿಸುತ್ತದೆ".

(ಡಿ. ವೆಂಕಟೇಶ್ ಮೂರ್ತಿ)
ಮಹಾಪೌರರು